2	ದಾರುಜ್ ಜೊಹರಾ ಸೋಷಿಯಲ್ ಅಂಡ್ ವೆಲ್ ಫೇರ್ ಟ್ರಸ್ಟ್ (ರಿ), ಅಲಿಪುರ,	ಕಾಮಗಾರಿಯು ಪೂರ್ಣಗೊಂಡಿರುವುದು
3	ಅಂಜುಮನ್ ಇ ಅಹ್ಲೆ ಸುನ್ನತುಲ್ಲಾ ಜಮಾತ್ ಜಾಮಿಯಾ ಮಸೀದಿ, ದಾರಿನಾಯಕನಪಾಳ್ಯ	ಸದರಿ ಕಟ್ಟಡದ ಅಂದಾಜು ವೆಚ್ಚವು ರೂ.65.00 ಲಕ್ಷಗಳಿದ್ದು, ಸರ್ಕಾರದಿಂದ ಗರಿಷ್ಟ ರೂ.20.00 ಲಕ್ಷಗಳನ್ನು ಬಿಡುಗಡೆ ಮಾಡಲು ಅವಕಾಶವಿರುತ್ತದೆ. ಉಳಿದ ಅನುದಾನವನ್ನು ದಾನಿಗಳು, ಸಾರ್ವಜನಿಕರು, ಚಂದಾದಾರರು ಹಾಗೂ ದೇಣಿಗೆ ಮುಖಾಂತರ ಪಡೆಯುವುದಾಗಿ ಸಂಸ್ಥೆಯವರು ಪ್ರಮಾಣ ಪತ್ರದಲ್ಲಿ ತಿಳಿಸಿರುತ್ತಾರೆ.

ತೇರದಾಳು ಮತಕ್ಷೇತ್ರದಲ್ಲಿಯ ಆಸ್ಪತ್ರೆಯಲ್ಲಿಯ ವೈದ್ಯರ ತಾಂತ್ರಿಕ ಸಿಬ್ಬಂದಿ ಕೊರತೆ

459 (936) ಶ್ರೀ ಸಿದ್ದು ಸವದಿ (ತೇರದಾಳ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೇರದಾಳ ಮತ ಕ್ಷೇತ್ರದಲ್ಲಿರುವ ಒಟ್ಟು ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅವು ಯಾವುವು;

ಆ) ಈ ಆಸ್ಪತ್ರೆಗಳಲ್ಲಿರುವ ಸಿಬ್ಬಂದಿಯ ಕೊರತೆಗಳೆಷ್ಟು; ಯಾವಾಗ ಸರಿಪಡಿಸುವಿರಿ;

ಇ) ಇಲ್ಲವಾದಲ್ಲಿ ಉತ್ತಮ ಚಿಕಿತ್ಸೆ ಇಲ್ಲದೆ, ರೋಗಿಗಳು ಪರದಾಡುತ್ತಿದ್ದಾರೆ ಅವರುಗಳಿಗೆ ಯಾವ ರೀತಿ ಚಿಕಿತ್ಸೆ ಕೊಡಿಸುವಿರಿ;

ಈ) ಗುತ್ತಿಗೆ ಆಧಾರದಲ್ಲಿಯಾದರೂ ವೈದ್ಯರನ್ನು ಆಯ್ಕೆ ಮಾಡುವ ಆಲೋಚನೆ ಇದೆಯೇ, ಇಲ್ಲದಿದ್ದಲ್ಲಿ ಪರಿಹಾರವೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ತೇರದಾಳ ಮತ ಕ್ಷೇತ್ರದಲ್ಲಿ 2 ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ 3 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕೆಳಕಂಡ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

ಸಮುದಾಯ ಆರೋಗ್ಯ ಕೇಂದ್ರ

1. ರಬಕವಿ–ಬನಹಟ್ಟಿ, ಜಮಖಂಡಿ ತಾಲ್ಲುಕು
2. ಮಹಾಲಿಂಗಪೂರ, ಮುಧೋಳ ತಾಲ್ಲೂಕು.

ಪ್ರಾಥಮಿಕ ಆರೋಗ್ಯ ಕೇಂದ್ರಗಳು

1. ತೇರದಾಳ
2. ಹಿಪ್ಪರಗಿ
3. ಚಿಮ್ಮಡ

ಆ) ಸಮುದಾಯ ಆರೋಗ್ಯ ಕೇಂದ್ರದಲ್ಲಿ 4 ತಜ್ಞ ವೈದ್ಯರ ಕೊರತೆ ಇದ್ದು, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 3 ವೈದ್ಯಾಧಿಕಾರಿಗಳ ಕೊರತೆ ಇದೆ ಹಾಗೂ ಸದರಿ ಕೇಂದ್ರಗಳಲ್ಲಿ 38 ಇತರೆ ಸಿಬ್ಬಂದಿಯ ಹುದ್ದೆಗಳ ಕೊರತೆ ಇದೆ.

ವೈದ್ಯರ ಮತ್ತು ಇತರೆ ಸಿಬ್ಬಂದಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮದ ವಿವರಗಳನ್ನು ಅನುಬಂಧ–1 ರಲ್ಲಿ ವಿವರಿಸಲಾಗಿದೆ.

ಇ) ಲಭ್ಯವಿರುವ ವೈದ್ಯರು ಮತ್ತು ಸಿಬ್ಬಂದಿಗಳಿಂದ ರೋಗಿಗಳಿಗೆ ತೊಂದರೆಯಾಗದ ರೀತಿ ಚಿಕಿತ್ಸೆ ನೀಡಲಾಗುತ್ತಿದೆ.

ಈ) ಖಾಲಿ ಇರುವ 562 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದೆ. ಅಲ್ಲದೆ, ಈಗಾಗಲೇ ಅನುಬಂಧ–1 ರಲ್ಲಿ ವಿವರಿಸಿರುವ ಹಾಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.

ಅನುಬಂಧ – 1

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

1. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.
2. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಠ ರೂ. 50,000 ರವರೆಗೆ ಗೌರವಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ.500, (2) ಅರವಳಿಕೆ ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.
3. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ:2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ.5,000 ಗೌರವ ಧನ ನೀಡಿ ರಿಟೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ.1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
7. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಸಮುದಾಯ ಭವನದ ಸೌಲಭ್ಯವನ್ನು ಎಲ್ಲಾ ನೇಕಾರ ಒಳ ಪಂಗಡಗಳಿಗೂ ಪೂರೈಸುವ ಕುರಿತು.

461 (938) ಶ್ರೀ ಸಿದ್ದು ಸವದಿ (ತೇರದಾಳ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗಗಳಡಿಯಲ್ಲಿ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ನೇಕಾರ ಸಮುದಾಯಕ್ಕೆ ದೇವಾಂಗ ಸಮುದಾಯ ಭವನ ಅಂತ ಹೆಸರಿನಿಂದ ರೂ.5 ಲಕ್ಷದವರೆಗೆ ಸೌಲಭ್ಯ ಒದಗಿಸುತ್ತಿರುವುದು ತಮ್ಮ ಗಮನಕ್ಕೆ ಬಂದಿದೆಯೇ;

ಆ) 2009–10ನೇ ಎಷ್ಟು ಸಮುದಾಯ ಭವನಗಳಿಗೆ ಆರ್ಥಿಕ ಸೌಲಭ್ಯ ಕೊಡಲಾಗಿದೆ, ಅವುಗಳಲ್ಲಿ ಯಾವ ಯಾವ ಪಂಗಡಗಳ ನೇಕಾರರಿಗೆ ಕೊಡಲಾಗಿದೆ;

ಇ) ನೇಕಾರರಲ್ಲಿಯೇ ಅತ್ಯಂತ ಹೆಚ್ಚಿನ ಸಂಖ್ಯೆಯಲ್ಲಿರುವ ಕುರುವಿನಶೆಟ್ಟಿ ಅಂತ ಉಪಪಂಗಡವಿದ್ದು ಅವರುಗಳಿಗೆ ಸಮುದಾಯ ಭವನ ಮತ್ತು ವಿದ್ಯಾರ್ಥಿ ವೇತನಗಳನ್ನು ಕೊಡದೇ ಇರುವುದು ತಮ್ಮ ಗಮನಕ್ಕೆ ಇದೆಯೇ;